ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
ನಂ.16 ಸಿ, ಮಿಲ್ಲರ್ ಟ್ಯಾಂಕ್ ಬೆಡ್ ರಸ್ತೆ,
ವಸಂತನಗರ, ಬೆಂಗಳೂರು – 560052

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
**Email:directorgokdom@gmail.com**
**Web: www.gokdom.kar.nic.in**

**ಸಂಖ್ಯೆ: ಅಸಂನಿ/ಅ/ವಿನಿ/ಸಂ.ಹೆ/ಸಿಆರ್-82/2021-22** **ದಿನಾಂಕ:12.04.2022**

**ಅಧಿಕೃತ ಜ್ಞಾಪನ**

**ವಿಷಯ:** 2022-23 ನೇ ಸಾಲಿನ ಆಯವ್ಯಯದ ಘೋಷಣೆಯಂತೆ, ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾಥಿನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿನಿಲಯಕ್ಕೆ 25 ಸಂಖ್ಯಾಬಲ ಹೆಚ್ಚಿಸುವ ಕುರಿತು.

**ಉಲ್ಲೇಖ:** ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲೂಡಿ 151 ಎಂಡಿಎಸ್ 2022, ಬೆಂಗಳೂರು, ದಿನಾಂಕ:11.04.2022

2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 180 ರಲ್ಲಿ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು ಘೋಷಿಸಲಾಗಿತ್ತು. ಅದರಂತೆ ಉಲ್ಲೇಖಿತ ಸರ್ಕಾರಿ ಆದೇಶದನ್ವಯ 100 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆಯನ್ನು ಹೆಚ್ಚಿಸಲಾಗಿರುತ್ತದೆ. (ಆದೇಶದ ಪ್ರತಿ ಲಗತ್ತಿಸಿದೆ.)

ಆದ್ದರಿಂದ, 2022-23 ನೇ ಸಾಲಿನಿಂದ ಸದರಿ ಆದೇಶವನ್ನು ನಿಯಮಾನುಸಾರ ಅನುಷ್ಠಾನಗೊಳಿಸಲು ಸೂಕ್ತ ಕ್ರಮಕೈಗೊಳ್ಳುವುದು. ಮಂಜೂರಾದ ಸಂಖ್ಯೆಗನುಗುಣವಾಗಿ, ನಿಗದಿಪಡಿಸಿದ ಅನುಪಾತದಂತೆ ದಾಖಲಾತಿಗೆ ಕ್ರಮವಹಿಸತಕ್ಕದ್ದು ಹಾಗೂ ಕಾಲಕಾಲಕ್ಕೆ ನಿಗದಿಪಡಿಸಿದ ಆಹಾರ ವೆಚ್ಚದಂತೆ ಖರ್ಚು ಭರಿಸತಕ್ಕದ್ದು.

12/4/22

**ನಿರ್ದೇಶಕರು,**
**ಅಲ್ಪಸಂಖ್ಯಾತರ ನಿರ್ದೇಶನಾಲಯ,**
**ಬೆಂಗಳೂರು.**

ಪ್ರತಿಯನ್ನು:

1. ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ.
2. ಎಲ್ಲಾ ಜಿಲ್ಲೆಗಳ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
3. ಎಲ್ಲಾ ಉಪ-ವಿಭಾಗ/ತಾಲ್ಲೂಕುಗಳ ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು.
4. ಎಲ್ಲಾ ವಿದ್ಯಾರ್ಥಿನಿಲಯಗಳ ನಿಲಯಪಾಲಕರಿಗೆ (ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರ ಮುಖಾಂತರ)

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾಥಿನಿಲಯಗಳಲ್ಲಿ ಪ್ರತಿ ವಿದ್ಯಾರ್ಥಿನಿಲಯಕ್ಕೆ 25 ಸಂಖ್ಯಾಬಲ ಹೆಚ್ಚಿಸಿ ಆದೇಶ ಹೊರಡಿಸುವ ಕುರಿತು.

**ಓದಲಾಗಿದೆ**

1. 2022-23ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ 180**
2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯರವರ ಏಕ ಕಡತ ಸಂಖ್ಯೆ: ಅಸಂನಿ/ ಅ/ ವಿನಿ/ ಸಂ.ಹೆ/ ಸಿಆರ್-82/ 2021-22 ದಿನಾಂಕ:23.03.2022
3. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ/ 02/ ವೆಚ್ಚ-03/ 2022, ದಿನಾಂಕ:06.04.2022.
4. ಸರ್ಕಾರದ ಆದೇಶ ಸಂಖ್ಯೆ: ಎಂಡಬ್ಲ್ಯೂಡಿ/118/ಎಂಡಿಎಸ್/2022, ದಿನಾಂಕ: 08-04-2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ 01ರಲ್ಲಿ **ಮಾನ್ಯ ಮುಖ್ಯಮಂತ್ರಿಗಳು 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 180 ರಲ್ಲಿ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ 100 ವಿದ್ಯಾಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು 10 ಕೋಟಿ ರೂ.ಗಳ ಅನುದಾನ ಒದಗಿಸಲಾಗುವುದು ಎಂದು ಘೋಷಿಸಿರುತ್ತಾರೆ.**

ಮೇಲೆ ಓದಲಾದ ಕ್ರಮ ಸಂಖ್ಯೆ 02ರಲ್ಲಿ ಅಲ್ಪಸಂಖ್ಯಾತರ ಸಮುದಾಯಕ್ಕೆ ಸೇರಿದ ವಿದ್ಯಾರ್ಥಿಗಳು ಪ್ರಾಥಮಿಕ, ಪ್ರೌಢ ಹಾಗೂ ಮೆಟ್ರಿಕ್ ನಂತರದ ಶಿಕ್ಷಣವನ್ನು ಮುಂದುವರೆಸಲು ಪ್ರೋತ್ಸಾಹಿಸುವ ಸಲುವಾಗಿ, ಸರ್ಕಾರಿ/ಅನುದಾನಿತ ಅಂಗೀಕೃತ ಶಿಕ್ಷಣ ಸಂಸ್ಥೆಗಳಲ್ಲಿ ಮೆಟ್ರಿಕ್ ನಂತರದ ಕೋರ್ಸುಗಳಾದ ಪಿಯುಸಿ, ಪದವಿ, ಸ್ನಾತಕೋತ್ತರ ಪದವಿ, ಎಂಬಿಬಿಎಸ್, ಡಿಪ್ಲೋಮ, ವೃತ್ತಿಶಿಕ್ಷಣ ಇತ್ಯಾದಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗಾಗಿ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳನ್ನು ಪ್ರಾರಂಭಿಸಲಾಗಿದ್ದು, ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿಗಳನ್ನು ಸಲ್ಲಿಸುತ್ತಿರುವುದರಿಂದ/ಹೆಚ್ಚಿನ ಬೇಡಿಕೆ ಇರುವುದರಿಂದ ಹಾಗೂ ಮಾನ್ಯ ಮುಖ್ಯಮಂತ್ರಿಗಳ 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಒಟ್ಟು 100 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿ 25 ಸಂಖ್ಯಾಬಲ ಹೆಚ್ಚಿಸಲು ಕೋರಿ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ರವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ 03ರಲ್ಲಿ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ ಈಗಾಗಲೇ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿನಿಲಯಗಳಲ್ಲಿ ತಲಾ 25 ದಾಖಲಾತಿ ಸಂಖ್ಯೆ ಹೆಚ್ಚಿಸಲು ಆದೇಶ ಹೊರಡಿಸಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮವಹಿಸುವಂತೆ ಹಿಂಬರಹ ನೀಡಿರುತ್ತಾರೆ.